ಭಾರತೀಯ ಜನತಾ ಪಾರ್ಟಿ–ಕರ್ನಾಟಕ
Bharatiya Janatha Party-Karnataka
# 48, "ಜಗನ್ನಾಥ ಭವನ", ದೇವಸ್ಥಾನದ ಬೀದಿ, 11ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು–560003.
ದೂ.: 080–22041976, 23569999, ಫ್ಯಾಕ್ಸ್: 080–23460398

**27.4.2025**

**ಗೆ,**

**ಸಂಪಾದಕರು / ವರದಿಗಾರರು**

**ಪ್ರಕಟಣೆಯ ಕೃಪೆಗಾಗಿ**

# ಭಾರತೀಯ ಮಜ್ದೂರ್ ಸಂಘದ ಅಖಿಲ ಭಾರತ ಉಪಾಧ್ಯಕ್ಷ ಡಿ.ಕೆ.ಸದಾಶಿವ್ ಅವರ ನಿಧನಕ್ಕೆ ವಿಜಯೇಂದ್ರ ಸಂತಾಪ

ಬೆಂಗಳೂರು: ಭಾರತೀಯ ಮಜ್ದೂರ್ ಸಂಘದ ಅಖಿಲ ಭಾರತ ಉಪಾಧ್ಯಕ್ಷ ಡಿ.ಕೆ.ಸದಾಶಿವ್ ಅವರ ನಿಧನಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ ವಿಜಯೇಂದ್ರ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ.

ಶಿವಮೊಗ್ಗದ ತುಂಗಭದ್ರಾ ಸಕ್ಕರೆ ಕಾರ್ಖಾನೆಯಲ್ಲಿ ನೌಕರರಾಗಿ ಸೇರುವ ಮೂಲಕ ಅವರು ಕಾರ್ಮಿಕ ಜೀವನ ಆರಂಭಿಸಿದರು. ಅಲ್ಲದೆ ಶೇಷಾದ್ರಿ ಜೊತೆಗೆ ಸೇರಿ ಬಿಎಂಎಸ್ ಸ್ಥಾಪನೆ ಮಾಡಿದರು. ಜೊತೆಗೆ ಜಿಲ್ಲೆಯಲ್ಲಿ ಹತ್ತಾರು ಕಾರ್ಮಿಕ ಯೂನಿಯನ್ ಸ್ಥಾಪನೆ ಮಾಡಿದ್ದರು ಎಂದು ತಿಳಿಸಿದ್ದಾರೆ.

ಬಳಿಕ ಬಿಎಂಎಸ್ ಪೂರ್ಣಾವಧಿ ಕೆಲಸಕ್ಕೆ ನಿಯೋಜಿತ ಆದ ಅವರು ಸಕ್ಕರೆ ಕಾರ್ಖಾನೆ ನೌಕರ ಹುದ್ದೆಗೆ ರಾಜೀನಾಮೆ ನೀಡಿ, ಇಡೀ ರಾಜ್ಯದಲ್ಲಿ ಸುತ್ತಾಡಿ ಬಿಎಂಎಸ್ ಪ್ರಬಲವಾಗಿ ಕಟ್ಟಿ,

# 48, "JAGANNATHA BHAVAN", Temple Street, 11th Cross, Malleshwara, Bengaluru-560003.
Phone: 080-22041976, 23569999, Fax: 080-23460398
e-mail: bjponline@gmail.com, web: www.bjpkarnataka.org

ಕೊನೆಯವರೆಗೂ ಕಾರ್ಮಿಕ ಪರ ಹೋರಾಟದಲ್ಲಿ ತೊಡಗಿಸಿಕೊಂಡಿದ್ದರು ಎಂದು ಅವರು ತಿಳಿಸಿದ್ದಾರೆ.

ಮೃತರ ಕುಟುಂಬಕ್ಕೆ ಬಂಧುಮಿತ್ರರು ಮತ್ತು ಅಭಿಮಾನಿಗಳಿಗೆ ಅವರ ಅಗಲುವಿಕೆಯನ್ನು ಸಹಿಸುವ ಶಕ್ತಿಯನ್ನು ಭಗವಂತನು ಕರುಣಿಸಲಿ. ಮೃತರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಎಂದು ಪ್ರಾರ್ಥಿಸಿದ್ದಾರೆ.

(ಕರುಣಾಕರ ಖಾಸಲೆ)

ರಾಜ್ಯ ಮಾಧ್ಯಮ ಸಂಚಾಲಕರು

ಬಿಜೆಪಿ ಕರ್ನಾಟಕ

# 48, "JAGANNATHA BHAVAN", Temple Street, 11th Cross, Malleshwara, Bengaluru-560003.
Phone: 080-22041976, 23569999, Fax: 080-23460398
e-mail: bjponline@gmail.com, web: www.bjpkarnataka.org